I/270948/2022

ಕರ್ನಾಟಕ ಸರ್ಕಾರ
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ:ಡಿಟಿಇ/15 /ಸಿಡಿಸಿ(2)/2022(674494)

ಆಯುಕ್ತರ ಕಛೇರಿ,
ತಾಂತ್ರಿಕ ಶಿಕ್ಷಣ ಭವನ, ಅರಮನೆ ರಸ್ತೆ,
ಬೆಂಗಳೂರು-560001, ದಿನಾಂಕ:15/06/2022.

: **ಸುತ್ತೋಲೆ :**

ವಿಷಯ: UNACADEMY ಸಂಸ್ಥೆಯ ವಿದ್ಯಾರ್ಥಿ ವೇತನ ಪರೀಕ್ಷೆಗೆ ನೋಂದಾಯಿಸಿಕೊಳ್ಳುವ ಬಗ್ಗೆ ಮತ್ತು ಸ್ಪರ್ಧಾತ್ಮಕ ಪರೀಕ್ಷೆಗೆ ಹಾಜರಾಗುವ ಕುರಿತು.

-0-0-

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆಯು ವಿದ್ಯಾರ್ಥಿಗಳನ್ನು ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ತಯಾರಿಗೊಳಿಸಲು UNACADEMY ಸಂಸ್ಥೆಯೊಂದಿಗೆ 2021-22 ಸಾಲಿನಿಂದ ಒಡಂಬಡಿಕೆ ಮಾಡಿಕೊಂಡಿರುತ್ತದೆ. ಅದರಂತೆ UNACADEMY ಸಂಸ್ಥೆಯು ಜೂನ್/ ಜುಲೈ2022 ರಲ್ಲಿ ರಾಜ್ಯದ ಸರ್ಕಾರಿ ಪಾಲಿಟೆಕ್ನಿಕ್, ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ಹಾಗೂ ಸರ್ಕಾರಿ ಪದವಿ ಕಾಲೇಜುಗಳ ವಿದ್ಯಾರ್ಥಿಗಳಿಗೆ ಆನ್ಲೈನ್ ಮೂಲಕ ಸ್ಪರ್ಧಾತ್ಮಕ ಪರೀಕ್ಷೆಯನ್ನು ನಡೆಸಲು ಯೋಜಿಸಲಾಗಿದೆ. ಸದರಿ ಪರೀಕ್ಷೆಯಲ್ಲಿಅತ್ಯುತ್ತಮ ಸಾಧನೆ ಮಾಡುವ ಟಾಪ್ 3250 ವಿದ್ಯಾರ್ಥಿಗಳನ್ನು ಆಯ್ಕೆ ಮಾಡಿಕೊಂಡು ಉಚಿತವಾಗಿ ಆನ್ಲೈನ್ ಮೂಲಕ ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ತರಬೇತಿ ನೀಡಲಿದ್ದಾರೆ. ಈ ಕೆಳಕಂಡ ಪರೀಕ್ಷೆಗಳಿಗೆ ಒಂದು ವರ್ಷದ ಕೋರ್ಸ್ಅನ್ನು ಉಚಿತವಾಗಿ ಶೇಕಡ ನೂರರಷ್ಟು ವಿದ್ಯಾರ್ಥಿವೇತನ ಆಧಾರಿತ ಚಂದಾದಾರಿಕೆ (100% free subscription) ಹಾಗೂ ತರಬೇತಿಯನ್ನು ಆಯ್ಕೆಯಾದ ವಿದ್ಯಾರ್ಥಿಗಳ ಇಚ್ಛಾನುಸಾರ ಈ ಕೆಳಕಂಡ ಯಾವುದಾದರೂ ಒಂದು ಪರೀಕ್ಷೆಗೆ ಉಚಿತ ತರಬೇತಿಯನ್ನು ಕೊಡಲಾಗುತ್ತದೆ.

**·UPSC /KPSC/Banking /Defense/RBI/NABARD/Staff Selection Commission(SSC)**

ಈ ಹಿನ್ನೆಲೆಯಲ್ಲಿ ರಾಜ್ಯದ ಸರ್ಕಾರಿ ಇಂಜಿನಿಯರಿಂಗ್ ಕಾಲೇಜ್ ಹಾಗೂ ಸರ್ಕಾರಿ ಪಾಲಿಟೆಕ್ನಿಕ್ ನ ಅಂತಿಮ ವರ್ಷ(Final Year) ಹಾಗೂ ಪೂರ್ವ ಅಂತಿಮ ವರ್ಷದ (Pre-Final year) ವಿದ್ಯಾರ್ಥಿಗಳು Unacademy Scholarship ಪರೀಕ್ಷೆಗೆ ಕೆಳಕಂಡ ಲಿಂಕ್ ಮೂಲಕ ನೊಂದಾಯಿಸಲು ಹಾಗೂ ನಿಗದಿತ ದಿನಾಂಕದಂದು ಪರೀಕ್ಷೆಯನ್ನು ತೆಗೆದುಕೊಳ್ಳಲು ಸೂಚಿಸಲಾಗಿದೆ. ಮುಂದುವರೆದು ಸರ್ಕಾರಿ ಇಂಜಿನಿಯರಿಂಗ್ ಹಾಗೂ ಪಾಲಿಟೆಕ್ನಿಕ್ ಸಂಸ್ಥೆಯಲ್ಲಿನ ಉದ್ಯೋಗ ಮತ್ತು ತರಬೇತಿ ಅಧಿಕಾರಿ ಹಾಗೂ ಪ್ರಾಂಶುಪಾಲರು ಈ ನಿಟ್ಟಿನಲ್ಲಿ ಸೂಕ್ತ ಕ್ರಮವಹಿಸಲು ಸೂಚಿಸಲಾಗಿದೆ.

**Registration Start Date**: 15th June 2022
**Test Date:** 16 & 17th July 2022
**Mode:** Online
**Registration Link:** https://unacademy.com/scholarship/dcte2
**INVITE CODE: UAGOVT10**

ಜಂಟಿ ನಿರ್ದೇಶಕರು (ಸಿಡಿಸಿ)

ಇವರಿಗೆ: ರಾಜ್ಯದ ಎಲ್ಲಾ ಸರ್ಕಾರಿ ಇಂಜಿನಿಯರಿಂಗ್ ಮತ್ತು ಪಾಲಿಟೆಕ್ನಿಕ್ ಸಂಸ್ಥೆಗಳ ಪ್ರಾಚಾರ್ಯರ್ಗಳಿಗೆ ಸೂಕ್ತ ಮುಂದಿನ ಕ್ರಮಕಾಗಿ ಸುತ್ತೋಲೆ ಮುಖಾಂತರ.

ಪ್ರತಿ:-

1. ಆಯುಕ್ತರ ಆಪ್ತಶಾಖೆಗೆ ಮಾಹಿತಿಗಾಗಿ
2. ನಿರ್ದೇಶಕರ ಆಪ್ತಶಾಖೆಗೆ ಮಾಹಿತಿಗಾಗಿ
3. ಇ ಆಡಳಿತ ವಿಭಾಗಕ್ಕೆ ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸಲು.